ಈ) ಕಛೇರಿ ಕಟ್ಟಡ ನಿರ್ಮಿಸಲು ಪ್ಲಾನ್ ಮತ್ತು ಎಸ್ಟಿಮೇಟ್ ಪ್ರಕಾರ ರೂ.1674800.00ಗಳೂ ಬೇಕಾಗುತ್ತದೆ.

ಹೊಸ ಕಟ್ಟಡ ನಿರ್ಮಾಣಕ್ಕೆ ಅನುದಾನ ಲಭ್ಯತೆಯಿಲ್ಲದಿರುವ ಕಾರಣ ಕಟ್ಟಡ ನಿರ್ಮಿಸಿಲ್ಲ.

ಉ) ಅನುದಾನ ಲಭ್ಯತೆಯನ್ನು ಆಧರಿಸಿ ಸ್ವಂತ ಕಟ್ಟಡ ನಿರ್ಮಿಸಲು ಮುಂದಿನ ವರ್ಷದಲ್ಲಿ ಕ್ರಮ ಕೈಗೊಳ್ಳಲಾಗುವುದು.

ಊ) ಅನುದಾನ ಬಿಡುಗಡೆಯಾದ ನಂತರ ಕಟ್ಟಡ ನಿರ್ಮಿಸಲು ಕ್ರಮ ಕೈಗೊಳ್ಳಲಾಗುವುದು.

ಅನುಬಂಧ (ಆ)

ಚುಕ್ಕೆ ಗುರ್ತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಿರುವ ಪ್ರಶ್ನೋತ್ತರಗಳು

799(1035) : ಶ್ರೀ ಅಕ್ಕಿ ಮಲ್ಲಿಕಾರ್ಜುನ ಸಹದೇವಪ್ಪ (ಕುಂದಗೋಳ): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಧಾರವಾಡ ಜಿಲ್ಲಾ ಪಂಚಾಯತ್‌ಗೆ ಒಳಪಡುವ ಎಷ್ಟು ಕಿಲೋ ಮೀಟರ್ ರಸ್ತೆಗಳಿವೆ ;

ಆ) ಈ ಜಿಲ್ಲೆಯಲ್ಲಿ ಎಷ್ಟು ಕಿಲೋ ಮೀಟರ್ ರಸ್ತೆಗಳು ಡಾಂಬರೀಕರಣ ವಾಗದೆ ಉಳಿದಿದೆ ;

ಇ) ಡಾಂಬರೀಕರಣ ಮಾಡಲು ಕೈಗೊಂಡ ಕ್ರಮವೇನು ?

ಶ್ರೀ ಸಿ.ಎಂ. ಉದಾಸಿ (ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು)–

ಅ) ಧಾರವಾಡ ಜಿಲ್ಲಾ ಪಂಚಾಯತ್ ವ್ಯಾಪ್ತಿಗೆ ಒಳಪಡುವ ರಸ್ತೆ ಉದ್ದ 3258 ಕಿ.ಮೀ.ಗಳು.

ಆ) ಈ ಜಿಲ್ಲೆಯಲ್ಲಿ ಡಾಂಬರೀಕರಣವಾಗದೆ ಉಳಿದ ರಸ್ತೆ ಉದ್ದ 2532.95 ಕಿ.ಮೀ.ಗಳು

ಇ) ಗ್ರಾಮೀಣ ರಸ್ತೆಗಳ ಡಾಂಬರೀಕರಣ ಮತ್ತು ಅಭಿವೃದ್ಧಿಗಾಗಿ ಕೆಳಕಂಡ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತದೆ. ಧಾರವಾಡ ಜಿಲ್ಲಾ ಪಂಚಾಯತ್‌ಗೆ ಪ್ರಸಕ್ತ ಸಾಲಿನಲ್ಲಿ ಕೆಳಕಂಡಂತೆ ಅನುದಾನ ಒದಗಿಸಲಾಗಿದೆ.

ಕ್ರಸಂ.	ಯೋಜನೆ	ಅನುದಾನ (ರೂ.ಲಕ್ಷಗಳಲ್ಲಿ)
1	ಮುಖ್ಯಮಂತ್ರಿ ಗ್ರಾಮೀಣ ರಸ್ತೆ ಅಭಿವೃದ್ಧಿ ಯೋಜನೆ	199.24
2	5054	55.67
3	ನಬಾರ್ಡ್	59.00
4	12ನೇ ಹಣಕಾಸು ಯೋಜನೆ	418.51
5	ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆ (ಹಂತ III, IV, V ಬ್ಯಾಚ್– 1 & 2)	1069.92

800(1036) : ಶ್ರೀ ಅಕ್ಕಿಮಲ್ಲಿಕಾರ್ಜುನ ಸಹದೇವಪ್ಪ (ಕುಂದಗೋಳ): ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಧಾರವಾಡ ಜಿಲ್ಲೆಯಲ್ಲಿರುವ ಒಟ್ಟು ಸರ್ಕಾರಿ ಪ್ರೌಢಶಾಲೆ ಎಷ್ಟು ;

ಆ) ಪ್ರೌಢಶಾಲೆಗಳಲ್ಲಿ ಬೋಧಕ ಸಂಖ್ಯೆ ಕಡಿಮೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಹುದ್ದೆಗಳನ್ನು ಯಾವಾಗ ಭರ್ತಿಮಾಡಲಾಗುವುದು ;

ಇ) ಹೊಸ ಪ್ರೌಢಶಾಲೆಗಳನ್ನು ತೆರೆಯುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

ಶ್ರೀ ಬಿ.ಎಸ್. ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)–

ಅ) 53

ಆ) ಹೌದು, ಖಾಲಿ ಇರುವ ಪ್ರೌಢಶಾಲಾ ಶಿಕ್ಷಕರ ಹುದ್ದೆಗಳನ್ನು ನೇಮಕಾತಿ ಮೂಲಕ ಭರ್ತಿಮಾಡಲು ಕ್ರಮ ಕೈಗೊಂಡಿದ್ದು, ಪ್ರಸ್ತಾವನೆಯು ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿದೆ. ಅಲ್ಲದೆ, ಪ್ರಾಥಮಿಕ ಶಾಲೆಯಲ್ಲಿನ ಪದವೀಧರ ಶಿಕ್ಷಕರಿಗೆ ಬಡ್ತಿ ಮೂಲಕ ತುಂಬಲು ಕ್ರಮ ಕೈಗೊಳ್ಳಲಾಗಿದೆ.

ಇ) ಪ್ರಸ್ತಾವನೆಯನ್ನು ಪರಿಶೀಲಿಸಲಾಗುತ್ತಿದೆ.

801 (1369): ಶ್ರೀ ಅಂಗಾರ ಎಸ್. (ಸುಳ್ಯ): ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸುಳ್ಯ ವಿಧಾನಸಭಾ ಕ್ಷೇತ್ರದಲ್ಲಿ ಎಷ್ಟು ಪದವಿ ಪೂರ್ವ ಕಾಲೇಜುಗಳಿವೆ;